Akashvani : Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

28.01.2026 18.40hrs

***************

ಮುಖ್ಯಾಂಶಗಳು

- ವಿಧಾನಸಭೆಯಲ್ಲಿಂದು ಫೋನ್ ಕದ್ದಾಲಿಕೆ ವಿಚಾರ ಪ್ರತಿಧ್ವನಿ ; ಪ್ರತಿಪಕ್ಷಗಳಿಂದ ಆಕ್ಷೇಪ
- ಮುಡಾ ಹಗರಣ - ಲೋಕಾಯುಕ್ತ ಬಿ ರಿಪೋರ್ಟ್ ಪುರಸ್ಕರಿಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ
- ಅಬಕಾರಿ ಖಾತೆ ಸಚಿವರಿಗೂ ಬಿಜೆಪಿ ಆರೋಪಕ್ಕೂ ಯಾವುದೇ ಸಂಬಂಧವಿಲ್ಲ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ
- ಮಂಗಳೂರಿನ ವೆನ್ಲಾಕ್ ಆಸ್ಪತ್ರೆಯನ್ನು ಮಾದರಿ ಆಸ್ಪತ್ರೆಯನ್ನಾಗಿಸುವ ಗುರಿ - ಆರೋಗ್ಯ ಸಚಿವ ದಿನೇಶ್ ಗುಂಡೂರಾವ್
- ಬೆಂಗಳೂರಿನಲ್ಲಿ ರಸ್ತೆ ಅಗಲೀಕರಣ ಮೇಲ್ವಿಚಾರಣೆಗೆ ಕಾರ್ಯಪಡೆ ರಚಿಸುವಂತೆ ಜಿಬಿಎ ಮುಖ್ಯ ಆಯುಕ್ತರು ಸೂಚನೆ

***************

ವಿಧಾನಸಭೆಯಲ್ಲಿಂದು ರಾಜ್ಯಪಾಲರ ಭಾಷಣದ ಮೇಲೆ ನಡೆದ ಚರ್ಚೆಯ ವೇಳೆ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ನಡೆಯಿತು. ಇದೇ ವೇಳೆ ಸಚಿವ ಎಚ್.ಕೆ.ಪಾಟೀಲ್ ರಾಜಭವನಕ್ಕೆ ದೆಹಲಿಯಿಂದ ಎಷ್ಟು ದೂರವಾಣಿ ಕರೆಗಳು ಬರುತ್ತವೆ. ಏನೆಲ್ಲಾ ನಿರ್ದೇಶನ ನೀಡಲಾಗುತ್ತದೆ ಎಂಬುದು ತಿಳಿದಿದೆ ಎಂದು ಹೇಳಿದರು.

ಈ ವೇಳೆ ಬಿಜೆಪಿಯ ಎಸ್.ಸುರೇಶ್ ಕುಮಾರ್ ಹಾಗೂ ಪ್ರತಿಪಕ್ಷ ನಾಯಕ ಆರ್.ಅಶೋಕ, ಆಕ್ಷೇಪ ವ್ಯಕ್ತಪಡಿಸಿ ರಾಜಭವನಕ್ಕೆ ಕೇಂದ್ರದಿಂದ ದೂರವಾಣಿ ಕರೆ ಬರುವುದು ಇವರಿಗೆ ಹೇಗೆ ಗೊತ್ತಾಗುತ್ತದೆ, ರಾಜಸರ್ಕಾರ ರಾಜಭವನ ಪೋನ್ ಕದ್ದಾಲಿಸುತ್ತದೆ ಎಂದು ಆರೋಪಿಸಿದರು.

ಪ್ರತಿಪಕ್ಷದ ಸದಸ್ಯರ ಆರೋಪಕ್ಕೆ ಪ್ರತ್ಯುತ್ತರ ನೀಡಿದ ಸಚಿವ ಎಚ್.ಕೆ.ಪಾಟೀಲ್, ರಾಜಭವನಕ್ಕೆ ಕೇಂದ್ರ ಸಚಿವಾಲಯದ ದೂರವಾಣಿ ಕರೆ ಬರುತ್ತದೆ ಎಂದು ಆರೋಪ ಮಾಡುತ್ತಿದ್ದೇನೆ ಎಂದು ತಮ್ಮ ಹೇಳಿಕೆ ಸಮರ್ಥಿಸಿಕೊಂಡರು.

ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಇದು ಫೋನ್ ಟ್ಯಾಪಿಂಗ್ ಸರ್ಕಾರವೇ ಎಂದು ಪ್ರಶ್ನಿಸಿದರು. ಬಳಿಕ ನಡೆದ ಚರ್ಚೆಯ ವೇಳೆ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ನಡೆದ ಹಿನ್ನೆಲೆಯಲ್ಲಿ ಸಭಾಧ್ಯಕ್ಷರು ಸದನವನ್ನು ೧೫ ನಿಮಿಷಗಳ ಕಾಲ ಮುಂದೂಡಿದರು.

***************

ವಿಧಾನಪರಿಷತ್‌ನಲ್ಲಿಯೂ ಇಂದು ರಾಜ್ಯಪಾಲರ ಭಾಷಣದ ಕುರಿತಂತೆ ನಡೆದ ಚರ್ಚೆಯ ವೇಳೆ ಆಡಳಿತ ಪಕ್ಷ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ನಡೆಯಿತು.

ರಾಜ್ಯಪಾಲರ ಭಾಷಣದ ಮೇಲೆ ಸಭಾನಾಯಕ ಬೋಸರಾಜು ಅವರು, ಖಂಡನೆ ವ್ಯಕ್ತಪಡಿಸಿದ್ದಕ್ಕೆ ವಿಷಾದ ವ್ಯಕ್ತಪಡಿಸಬೇಕು ಹಾಗೂ ಕಡತದಿಂದ ತೆಗೆದುಹಾಕುವಂತೆ ಸದಸ್ಯ ಸಿ.ಟಿ.ರವಿ ಒತ್ತಾಯಿಸಿದರು.

ಈ ವೇಳೆ ಕಾಂಗ್ರೆಸ್ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಮಾತಿನ ಗದ್ದಲ ಹೆಚ್ಚಾಗುತ್ತಿದ್ದಂತೆ ಕಾಂಗ್ರೆಸ್ ಸದಸ್ಯರ ಬಿ.ಕೆ. ಹರಿಪ್ರಸಾದ್ ಮಾತನಾಡಿ, ರಾಜ್ಯಪಾಲರು ಮೂಲಭೂತ ಕರ್ತವ್ಯವನ್ನು ಪಾಲಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹರಿಪ್ರಸಾದ್ ಮಾತಿಗೆ ವಿಪಕ್ಷ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿ ಸದನದ ಬಾಗಿಯೊಳಗೆ ಇಳಿದು ಧಿಕ್ಕಾರ ಕೂಗಿದರು. ಪರಿಸ್ಥಿತಿ ಕೈಮೀರುತ್ತಿದ್ದಂತೆಯೇ ಮಧ್ಯ ಪ್ರವೇಶಿಸಿದ ಸಭಾಪತಿ ಬಸವರಾಜ ಹೊರಟ್ಟಿ ಸದಸ್ಯರಿಗೆ ಘೋಷಣೆ ಕೂಗಿದವರನ್ನು ಹೊರಹಾಕಲಾಗುವುದು ಎಂದು ಎಚ್ಚರಿಕೆ ನೀಡಿದರು.

ಬಳಿಕ ಸದನವನ್ನು ಕೆಲಕಾಲ ಮುಂದೂಡಿದರು.

***************

ಮೂಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತ ನೀಡಿದ್ದ ಬಿ ರಿಪೋರ್ಟ್ ಅನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಒಪ್ಪಿದೆ.

ಲೋಕಾಯುಕ್ತ ಕ್ಲೀನ್‌ಚಿಟ್ ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ನ್ಯಾಯಾಲಯ ವಜಾಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಪತ್ನಿ ಪಾರ್ವತಿ ಸೇರಿದಂತೆ ನಾಲ್ವರ ವಿರುದ್ಧ ಲೋಕಾಯುಕ್ತ ಪೊಲೀಸರು ಬಿ ರಿಪೋರ್ಟ್ ನೀಡಿದ್ದನ್ನು ಪ್ರಶ್ನಿಸಿ ದೂರುದಾರ ಸ್ನೇಹಮಹಿ ಕೃಷ್ಣ ನ್ಯಾಯಾಲಯದ ಮೆಟ್ಟಿಲೇರಿದ್ದರು.

ಇದೀಗ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ಸಂತೋಷ್ ಗಜಾನನಭಟ್ ಅರ್ಜಿ ವಜಾಗೊಳಿಸಿದ್ದಾರೆ. ಅಧಿಕಾರಿಗಳ ಮೇಲಿನ ತನಿಖೆ ಮುಂದುವರಿಸಲು ಸೂಚಿಸಿದ್ದಾರೆ.

***************

ಅಬಕಾರಿ ಖಾತೆ ಸಚಿವ ಆರ್.ಬಿ.ತಿಮ್ಮಾಪುರ ಅವರಿಗೂ, ಬಿಜೆಪಿ ಆರೋಪಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದರ ಹಿಂದೆ ರಾಜಕೀಯ ಷಡ್ಯಂತ್ರ ಇದೆ ಎಂದು ಹೇಳಿದ್ದಾರೆ.

ಇದೇ ವೇಳೆ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜೀತ್ ಪವಾರ್ ಸಾವು ಆಘಾತಕಾರಿ ಎಂದು ತಿಳಿಸಿದ್ದಾರೆ. ರಾಜಕಾರಣಿಗಳು ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದ್ದಾರೆ.

***************

ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಮಂಗಳೂರಿನ ವೆನ್ಲಾಕ್ ಸರ್ಕಾರಿ ಆಸ್ಪತ್ರೆಯನ್ನು ೭೦ ಕೋಟಿ ರೂಪಾಯಿ ವೆಚ್ಚದಲ್ಲಿ ಎರಡು ಹಂತದಲ್ಲಿ ವಿಸ್ತರಿಸಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೊದಲನೇ ಹಂತದಲ್ಲಿ ೩೫ ಕೋಟಿ ರೂಪಾಯಿ ವೆಚ್ಚದಲ್ಲಿ ನೂತನ ಎರಡು ಅಂತಸ್ತಿನ ಒಪಿಡಿ ವಿಭಾಗವನ್ನು ನಿರ್ಮಾಣ ಮಾಡಲು ಸದ್ಯದಲ್ಲಿಯೇ ಟೆಂಡರ್ ಆಹ್ವಾನಿಸಲಾಗುವುದು. ಈ ಕಟ್ಟಡದಲ್ಲಿ ಸೌರವಿದ್ಯುತ್ ಘಟಕವೂ ಇರಲಿದ್ದು, ಸಿಸಿ ಟಿವಿ ಅಳವಡಿಸಲಾಗುವುದು ಎಂದು ಹೇಳಿದ್ದಾರೆ.

ವೆನ್ಲಾಕ್ ಆಸ್ಪತ್ರೆಯನ್ನು ಮಾದರಿ ಆಸ್ಪತ್ರೆಯಾಗಿ ನಿರ್ಮಾಣ ಮಾಡುವುದು ಆರೋಗ್ಯ ಇಲಾಖೆಯ ಗುರಿಯಾಗಿದ್ದು, ಈ ನೆಲೆಯಲ್ಲಿ ವಿಶೇಷವಾಗಿ ಗಮನಹರಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

***************

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ರಸ್ತೆ ಅಗಲೀಕರಣ ಹಾಗೂ ಅನಧಿಕೃತ ಕಟ್ಟಡಗಳ ಮೇಲ್ವಿಚಾರಣೆಗೆ ಪ್ರತ್ಯೇಕ ವಿಶೇಷ ಕಾರ್ಯಪಡೆ ರಚಿಸಲು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳು ಕೈಗೆತ್ತಿಕೊಂಡಿರುವ ಕಾಮಗಾರಿಗಳ ಅನುಷ್ಠಾನ ಸಂದರ್ಭದಲ್ಲಿ ಉದ್ಭವಿಸುವ ಸಮಸ್ಯೆಗಳನ್ನು ಇತ್ಯರ್ಥಪಡಿಸುವ ಉದ್ದೇಶದಿಂದ ಇಂದು ವಿವಿಧ ಇಲಾಖೆಗಳೊಂದಿಗೆ ನಡೆದ ಸಮನ್ವಯ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಆಯಾ ನಗರ ಪಾಲಿಕೆಗಳಲ್ಲಿ ಕೂಡಲೇ ವಿಶೇಷ ಕಾರ್ಯಪಡೆ ರಚಿಸಿ, ರಸ್ತೆ ಅಗಲೀಕರಣ ಹಾಗೂ ಅನಧಿಕೃತ ಕಟ್ಟಡಗಳ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಜಿಬಿಎ ವ್ಯಾಪ್ತಿಯ ಪೌರಕಾರ್ಮಿಕರಿಗೆ ಮುಖಚಹರೆ ಹಾಜರಾತಿ ವ್ಯವಸ್ಥೆಯನ್ನು ಜಾರಿಗೊಳಿಸಲಾಗುತ್ತಿದ್ದು, ಮುಂದಿನ ಎರಡು ವಾರಗಳೊಳಗೆ ಎಲ್ಲಾ ನಗರ ಪಾಲಿಕೆಗಳಲ್ಲಿಯೂ ಈ ವ್ಯವಸ್ಥೆ ಜಾರಿಗೊಳಿಸುವಂತೆ ಸೂಚಿಸಿದ್ದಾರೆ.

***************

ಬಾಗಲಕೋಟೆ ಜಿಲ್ಲೆಯ ಬಾದಾಮಿ, ಪಟ್ಟದಕಲ್ಲು ಹಾಗೂ ಐಹೊಳೆ ಪ್ರವಾಸಿ ತಾಣಗಳ ಸಮಗ್ರ ಅಭಿವೃದ್ಧಿಗೆ ವಿಸ್ತೃತ ಯೋಜನಾ ವರದಿ ತಯಾರಿಸುವಂತೆ ಸಂಸದ ಪಿ.ಸಿ.ಗದ್ದಿಗೌಡರ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದಿಂದ ಜಿಲ್ಲೆಯ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಅಂದಾಜು ೨೦೦ ಕೋಟಿ ರೂಪಾಯಿಗಳ ಸಮಗ್ರ ವಿಸ್ತೃತ ಯೋಜನಾ ವರದಿ ಸಿದ್ದಪಡಿಸಬೇಕಿದೆ. ಪ್ರವಾಸಿ ತಾಣಗಳ ವ್ಯಾಪ್ತಿಯ ಸ್ಥಳೀಯ ಅಧಿಕಾರಿಗಳ ಗಣನೆಗೆ ತೆಗೆದುಕೊಂಡು ಯೋಜನಾ ವರದಿ ಸಿದ್ದಪಡಿಸುವಂತೆ ತಿಳಿಸಿದ್ದಾರೆ.

***************

ಹಾವೇರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೌಶಲ್ಯಭಿವೃದ್ಧಿ ಉದ್ಯಮಶೀಲತಾ ಮತ್ತು ಜೀವನೋಪಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಉದ್ಯೋಗ ಮೇಳವನ್ನು ನಾಳೆ ಜಿ.ಎಚ್.ಕಾಲೇಜ್ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರುಚಿ ಬಿಂದಲ್ ತಿಳಿಸಿದ್ದಾರೆ.

ಉದ್ಯೋಗ ಮೇಳದಲ್ಲಿ ರಾಜ್ಯದ ಪ್ರತಿಷ್ಠಿತ ಕಂಪನಿಗಳು ಭಾಗಹಿಸುತ್ತಿದ್ದು, ಎಸ್.ಎಸ್.ಎಲ್.ಸಿ., ಪಿಯುಸಿ, ಪದವಿ, ಸ್ನಾತಕೋತ್ತರ ಪದವಿ, ಐಟಿಐ, ಡಿಪ್ಲೋಮಾ, ಬಿಇ ಹಾಗೂ ಇತರೆ ಯಾವುದೇ ವಿದ್ಯಾರ್ಹತೆ ಹೊಂದಿದ ೧೮ ರಿಂದ ೩೫ ವರ್ಷದೊಳಗಿನ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಹಾಗೂ ವಿಕಲಚೇತನ ಅಭ್ಯರ್ಥಿಗಳು ಉದ್ಯೋಗ ಮೇಳಕ್ಕೆ ಹಾಜರಾಗಬಹುದು. ಉದ್ಯೋಗ ಮೇಳದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ ಎಂದು ಮಾಹಿತಿ ನೀಡಿದ್ದಾರೆ.

ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕ್ಯೂ ಆರ್ ಕೋಡ್ ನೋಂದಣಿ ಕಡ್ಡಾಯವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಈ.ಸುಧೀಂದ್ರ ಕಾರವಾರದ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿನ ಜೈವಿಕ ಇಂಧನ ಸಂಶೋಧನೆ, ಮಾಹಿತಿ ಹಾಗೂ ಪ್ರಾತ್ಯಕ್ಷಿಕೆ ಕೇಂದ್ರಕ್ಕೆ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನೂತನ ಜೈವಿಕ ಇಂಧನ ರಚನೆಗೆ ಮತ್ತು ಈ ಕ್ಷೇತ್ರದಲ್ಲಿ ಹೆಚ್ಚಿನ ಬಂಡವಾಳ ಹೂಡಿಕೆಗಾಗಿ ಪ್ರೋತ್ಸಾಹ ದೊರಕಿಸುವಲ್ಲಿ ಇದು ಪರಿಣಾಮಕಾರಿಯಾಗಿವೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಅವರು, ಜಿಲ್ಲಾ ವಿಜ್ಞಾನ ಕೇಂದ್ರದ ಕಾರ್ಯಚಟುವಟಿಕೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು.

***************

ವಿಜಯನಗರ ಜಿಲ್ಲೆಯ ಅಂಕಸಮುದ್ರ ಮತ್ತು ತುಂಗಭದ್ರಾ ಜಲಾಶಯದ ಹಿನ್ನೀರಿನ ಪ್ರದೇಶಗಳಲ್ಲಿ ದೇಶ ವಿದೇಶಗಳ ಅಪರೂಪದ ಪಕ್ಷಿ ಸಂಕುಲಗಳು ಕಾಣಿಸಿಕೊಳ್ಳುತ್ತಿವೆ. ಹಂಪಿಯಲ್ಲಿ ಈಗ ಅಪರೂಪದ ಬ್ರೌನ್ ರಾಕ್ ಚಾಟ್ ಪಕ್ಷಿ ಪತ್ತೆಯಾಗಿರುವುದು ಪಕ್ಷಿ ಪ್ರೇಮಿಗಳಲ್ಲಿ ಕುತೂಹಲ ಕೆರಳಿಸಿದೆ.

ಮೂಲತಃ ಉತ್ತರ ಹಾಗೂ ಮಧ್ಯ ಭಾರತ ಪ್ರದೇಶಗಳಲ್ಲಿ ಆವಾಸಸ್ಥಾನ ಹೊಂದಿರುವ ಈ ಪಕ್ಷಿ ಇತ್ತೀಚೆಗೆ ಕರ್ನಾಟಕದ ವಿಜಯಪುರ ಮತ್ತು ಕೊಪ್ಪಳದ ಇಟಗಿಯ ಮಹಾದೇವ ದೇವಸ್ಥಾನದಲ್ಲಿ ಕಾಣಿಸಿಕೊಂಡಿತ್ತು. ಈಗ ಹಂಪಿಯ ದೇಗುಲಗಳ ಸ್ಮಾರಕಗಳ ಮೇಲೆ ಈ ಪಕ್ಷಿ ಓಡಾಡುತ್ತಿರುವುದನ್ನು ಪರಿಸರ ಪ್ರೇಮಿ ಪಂಪಯ್ಯ ಸ್ವಾಮಿ ಪತ್ತೆ ಹಚ್ಚಿದ್ದಾರೆ.

***************

ಫೆಬ್ರುವರಿ ೧೯ ರಂದು ಜಿಲ್ಲಾ ಮಟ್ಟದ ಛತ್ರಪತಿ ಶಿವಾಜಿ ಜಯಂತಿ ಆಚರಣೆಯ ಕುರಿತ ಪೂರ್ವಭಾವಿ ಸಭೆಯು ಕಾರವಾರದಲ್ಲಿ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಛತ್ರಪತಿ ಶಿವಾಜಿ ಜಯಂತಿ ಕಾರ್ಯಕ್ರಮವನ್ನು ಕಾರವಾರ ನಗರಸಭೆಯ ಉದ್ಯಾನವನದಲ್ಲಿ ಆಚರಿಸುವ ಕುರಿತಂತೆ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ಸಮುದಾಯದ ಜನತೆ ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

***************

ಒತ್ತಡಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ನೌಕರರ ಮಾನಸಿಕ ಹಾಗೂ ದೈಹಿಕ ಒತ್ತಡ ನಿವಾರಣೆಗೆ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ಸಹಕಾರಿಯಾಗಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಸತೀಶ್ ತಿಳಿಸಿದ್ದಾರೆ.

ರಾಮನಗರ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ೨೦೨೫-೨೬ನೇ ಸಾಲಿನ ಸರ್ಕಾರಿ ನೌಕರರ ರಾಮನಗರ ತಾಲ್ಲೂಕು ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ನೌಕರರು ಮಾನಸಿಕ ಹಾಗೂ ದೈಹಿಕ ಆರೋಗ್ಯದ ಕಡೆ ಗಮನಹರಿಸಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಕರೆ ನೀಡಿದರು.

*******ಮುಕ್ತಾಯ*******